## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ಶಿಶುಪಾಲನಾ ರಜೆ ಮಂಜೂರು ಮಾಡುವ ಕುರಿತು.

**ಓದಲಾಗಿದೆ:** 1. ಸರ್ಕಾರಿ ಆದೇಶ ಸಂಖ್ಯೆ: ಆಇ 1 ಸೇನಿಸೇ 2011, ದಿನಾಂಕ: 29.06.2011

2. ಸರ್ಕಾರಿ ಆದೇಶ ಸಂಖ್ಯೆ: ಆಇ 4(ಇ) ಸೇನಿಸೇ 2021 ಬೆಂಗಳೂರು, ದಿನಾಂಕ: 21.06.2021.

3. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 17.08.2021.

* * * * *

**ಪ್ರಸ್ತಾವನೆ:**

ಮೇಲೆ ಓದಲಾದ (1) ರ ಆದೇಶದಲ್ಲಿ ಬುದ್ಧಿಮಾಂದ್ಯ ಅಂಗವಿಕಲ ಮಕ್ಕಳನ್ನು ನೋಡಿಕೊಳ್ಳಲು ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ವೈದ್ಯಕೀಯ ಮಂಡಳಿಯ ಪ್ರಮಾಣ ಪತ್ರದ ಆಧಾರದ ಮೇಲೆ ಕೆಲವು ಷರತ್ತಿಗೊಳಪಟ್ಟು ಒಂದು ವರ್ಷದಲ್ಲಿ ಮೂರು ಕಂತುಗಳಿಗೆ ಮೀರದಂತೆ ಹಾಗೂ 15 ದಿನಗಳಿಗೆ ಕಡಿಮೆ ಇಲ್ಲದಂತೆ ಇಡೀ ಸೇವಾವಧಿಯಲ್ಲಿ ಎರಡು ವರ್ಷಗಳ ಅವಧಿಗೆ ಅಂದರೆ 730 ದಿನಗಳ ಶಿಶುಪಾಲನ ರಜೆಯನ್ನು ಮಂಜೂರು ಮಾಡಲಾಗಿದೆ.

ಪ್ರಸಕ್ತ ಸರ್ಕಾರವು 2021-22 ನೇ ಸಾಲಿನ ಆಯ್ಯವ್ಯಯ ಭಾಷಣದ ಕಂಡಿಕೆ-37 ರಲ್ಲಿ ರಾಜ್ಯ ಸರ್ಕಾರದ ಮಹಿಳಾ ನೌಕರರಿಗೆ ಚಾಲ್ತಿಯಲ್ಲಿರುವ ಪ್ರಸೂತಿ ರಜೆಯೊಂದಿಗೆ ಒಟ್ಟು ಸೇವಾವಧಿಯಲ್ಲಿ ಆರು ತಿಂಗಳವರೆಗೆ ಅಂದರೆ 180 ದಿನಗಳ ಶಿಶುಪಾಲನಾ ರಜೆಯನ್ನು ಉಲ್ಲೇಖ (2) ರ ಆದೇಶದಲ್ಲಿ ಘೋಷಿಸಿದ್ದು,

**ಅದರಂತೆ ಈ ಆದೇಶ**

**ವಿವಿ ಆದೇಶ ಸಂಖ್ಯೆ: ಸಿಬ್ಬಂದಿ-1/ಸಿ1/ಪವೇಶ್ರೇ/2018** **ದಿನಾಂಕ: 19.08.2021**

ಮೇಲ್ಕಂಡ ಉಲ್ಲೇಖಿತ (2) ರ ಸರ್ಕಾರಿ ಆದೇಶದ ಪ್ರಕಾರ ಬೆಂಗಳೂರು ವಿಶ್ವವಿದ್ಯಾಲಯದ ಮಹಿಳಾ ನೌಕರರಿಗೆ ಅವರ ಸೇವಾವಧಿಯಲ್ಲಿ ಗರಿಷ್ಠ ಆರು ತಿಂಗಳವರೆಗೆ ಅಂದರೆ 180 ದಿನಗಳ "ಶಿಶುಪಾಲನಾ ರಜೆ" ಯೋಜನೆಯನ್ನು ಈ ಕೆಳಕಂಡ ಷರತ್ತುಗಳ ಮೇರೆಗೆ ವಿಸ್ತರಿಸಲಾಗಿದೆ.

1. ಮಹಿಳಾ ಸರ್ಕಾರಿ ನೌಕರಳು ಹೊಂದಿರುವ ಮಕ್ಕಳ ಸಂಖ್ಯೆಯನ್ನು ಪರಿಗಣಿಸದೆ, ಅತ್ಯಂತ ಕಿರಿಯ ಮಗವು 18 ವರ್ಷ ತಲುಪುವವರೆಗಿನ ಅವಧಿಗೆ ಮಾತ್ರ ಈ ರಜೆಯ ಸೌಲಭ್ಯಕ್ಕೆ ಅರ್ಹರಾಗತಕ್ಕದ್ದು.
2. ಈ ರಜೆಯ ಅವಧಿಯಲ್ಲಿ ಅವಳು ರಜೆಯ ಮೇಲೆ ಹೋಗುವ ನಿಕಟ ಪೂರ್ವದಲ್ಲಿ ಪಡೆಯಲರ್ಹವಿರುವ ಸಂಪೂರ್ಣ ವೇತನಕ್ಕೆ ಸಮನಾದ ರಜೆ ಸಂಬಳಕ್ಕೆ ಅರ್ಹರಾಗತಕ್ಕದ್ದು.
3. ಪ್ರತಿ ಬಾರಿಯ ಈ ರಜೆ ಮಂಜೂರಾತಿಯು ಕನಿಷ್ಠ 15 ದಿನಗಳಿಗಿಂತ ಕಡಿಮೆ ಇರಬಾರದು.
4. ಮಹಿಳಾ ಸರ್ಕಾರಿ ನೌಕರಳು ಈ ರಜೆಯನ್ನು ಸಾಂದರ್ಭಿಕ ರಜೆಯ ಹೊರತಾಗಿ, ನಿಯಮಾನುಸಾರ ಪಡೆಯಲರ್ಹವಿರುವ ಅಸಾಧಾರಣ ರಜೆಯೂ ಒಳಗೊಂಡಂತೆ ಇತರೆ ರಜೆಯೊಂದಿಗೆ ಸಂಯೋಜಿಸಿ ಪಡೆಯಬಹುದು.

...2

5. ಈ ರಜೆಯನ್ನು ಯಾವುದೇ ರಜೆ ಲೆಕ್ಕದಿಂದ ಕಳೆಯತಕ್ಕದ್ದಲ್ಲ. ಉಪಯೋಗಿಸಿಕೊಳ್ಳದ ಈ ಸೌಲಭ್ಯದ ಸಂಬಂಧದಲ್ಲಿನ ರಜೆಯನ್ನು ಗಳಿಕೆ ರಜೆ ಲೆಕ್ಕಕ್ಕೆ ಜಮೆಗೊಳಿಸಲು/ನಗದೀಕರಿಸಲು ಅವಕಾಶವಿರುವುದಿಲ್ಲ.
6. ಬುದ್ಧಿಮಾಂದ್ಯ/ಅಂಗವಿಕಲ ಮಕ್ಕಳನ್ನು ಹೊಂದಿರುವ ಸರ್ಕಾರಿ ಮಹಿಳಾ ನೌಕರರಿಗೆ ಮಂಜೂರು ಮಾಡಿರುವ 730 ದಿನಗಳ ಶಿಶುಪಾಲನಾ ರಜೆ ಸೌಲಭ್ಯಕ್ಕೆ ಅರ್ಹರಾದ ಯಾವುದೇ ನೌಕರಳು ಆ ಯೋಜನೆಯನ್ನು ಆಯ್ಕೆ ಮಾಡಿಕೊಳ್ಳತಕ್ಕದ್ದು. ಅದರೊಂದಿಗೆ ಈ ಯೋಜನೆಯಡಿಯಲ್ಲಿನ ಸೌಲಭ್ಯಕ್ಕೂ ಅರ್ಹರಾಗತಕ್ಕದ್ದಲ್ಲ.
7. ಶಿಶುಪಾಲನಾ ರಜೆಯ ಮಂಜೂರಾತಿಗಾಗಿ ಯಾವುದೇ ಪೂರಕ ದಾಖಲೆಗಳನ್ನು ಪಡೆಯುವ ಅವಶ್ಯಕತೆಯಿರುವುದಿಲ್ಲ. ಸೇವಾ ಪುಸ್ತಕದಲ್ಲಿ ನಮೂದಿಸಿರುವ ಮಕ್ಕಳ ವಿವರಗಳ ಆಧಾರದ ಮೇಲೆ ಮಂಜೂರು ಮಾಡತಕ್ಕದ್ದು.
8. ಈ ಪೂರ್ವದಲ್ಲಿ ಮಂಜೂರಾಗಿರುವ ಯಾವುದೇ ಬಗೆಯ ರಜೆಯನ್ನು ಶಿಶುಪಾಲನಾ ರಜೆಯಾಗಿ ಪರಿವರ್ತಿಸತಕ್ಕದ್ದಲ್ಲ. ಈ ಆದೇಶದಡಿಯಲ್ಲಿನ ಸೌಲಭ್ಯವು ಆದೇಶವನ್ನು ಹೊರಡಿಸಿದ ದಿನಾಂಕದಿಂದ ಜಾರಿಗೊಳ್ಳತಕ್ಕದ್ದು.
9. ಈ ರಜೆಯನ್ನು ಮಂಜೂರು ಮಾಡುವ ಸಕ್ಷಮವಾದ ಪ್ರಾಧಿಕಾರವು ಶಿಶುಪಾಲನಾ ರಜೆಯ ಮಂಜೂರಾತಿಯನ್ನು ಸೇವಾ ಪುಸ್ತಕದಲ್ಲಿ ದಾಖಲು ಮಾಡುವುದು ಮತ್ತು ನಿಗದಿತ ನಮೂನೆಯಲ್ಲಿ ಲೆಕ್ಕವಿಡಬೇಕು (ವಿಶೇಷ ಮಕ್ಕಳ ಶಿಶುಪಾಲನಾ ರಜೆಯ ಲೆಕ್ಕವನ್ನಿಡುವ ಪ್ರಪತ್ರದ ಮಾದರಿಯಲ್ಲಿ)

ಆದೇಶದ ಮೇರೆಗೆ,

K. Jyothi 19/8/2024

ಕುಲಸಚಿವರು

ಪ್ರತಿಗಳು:

1. ವಿತ್ತಾಧಿಕಾರಿಗಳು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಬಟವಾಡೆ ಅಧಿಕಾರಿಗಳಿಗೆ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು
4. ಕುಲಪತಿಯವರು/ ಕುಲಸಚಿವರು/ ಕುಲಸಚಿವರು (ಮೌಲ್ಯಮಾಪನ)/ ವಿತ್ತಾಧಿಕಾರಿಯವರು, ಅವರುಗಳ ಆಪ್ತಕಾರ್ಯದರ್ಶಿ/ ಸಹಾಯಕರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು
5. ಸರ್ಕಾರಿ ಲೆಕ್ಕಪರಿಶೋಧಕರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು
6. ಕಛೇರಿ ಪ್ರತಿ/ ರಕ್ಷಾ ಕಡತ ಪ್ರತಿ.